## ಕರ್ನಾಟಕ ಸರ್ಕಾರ

## ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡಾವಳಿಗಳು

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ/186/ಎಸ್‌ಆರ್‌ಎಸ್/2018, ದಿನಾಂಕ :27.02.2019 ಹಾಗೂ ದಿನಾಂಕ : 15.05.2019
2. ಈ ಕಛೇರಿಯ ದಿನಾಂಕ :18.05.2022ರ ಸಂಖ್ಯೆ : ಕಾಶಿಇ/120/ ದ್ವಿ.ದ.ಸ/ಜೇ.ಪ/2020-21/ಬಸ್ಥಾವಿ'ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ದ್ವಿತೀಯ ದರ್ಜೆ ಸಹಾಯಕರುಗಳ ಅಂತಿಮ ಜೇಷ್ಠತಾ ಪಟ್ಟಿ.
3. ದಿನಾಂಕ:18.10.2022ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
4. ಈ ಕಛೇರಿ ಸಮ ಸಂಖ್ಯೆ ಆದೇಶ ದಿನಾಂಕ:15.11.2022.

*****

**ಪೀಠಿಕೆ:**

ಇಲಾಖೆಯ ಅರ್ಹ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಬಡ್ತಿ ನೀಡುವ ಸಂಬಂಧ, ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಿಗೆ ದ್ವಿತೀಯ ದರ್ಜೆ ಸಹಾಯಕರುಗಳ ಹುದ್ದೆಯಿಂದ ಶೇಕಡ 50 ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2)ರ ಪತ್ರದೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯವ್ಯಾಪಿ ಉಳಿಕೆ ಮೂಲವೃಂದ ಹಾಗೂ ಕಲ್ಯಾಣ-ಕರ್ನಾಟಕ ಸ್ಥಳೀಯ ವೃಂದದ ದ್ವಿತೀಯ ದರ್ಜೆ ಸಹಾಯಕರುಗಳ ಅಂತಿಮ ಜೇಷ್ಠತಾ ಪಟ್ಟಿಯ ಆಧಾರದ ಮೇಲೆ ಪ್ರಥಮ ದರ್ಜೆ ಸಹಾಯಕರ ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ಉಲ್ಲೇಖ (3)ರ ದಿನಾಂಕ:18.10.2022ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ ಪ್ರಥಮ ದರ್ಜೆ ಸಹಾಯಕರುಗಳ ಹುದ್ದೆಗಳನ್ನು ಜೇಷ್ಠತೆ ಹಾಗೂ ಅರ್ಹತೆ ಆಧಾರದ ಮೇಲೆ ಅರ್ಹ ದ್ವಿತೀಯ ದರ್ಜೆ ಸಹಾಯಕರುಗಳಿಂದ ಮುಂಬಡ್ತಿ ಮೂಲಕ ಭರ್ತಿ ಮಾಡಲು ತೀರ್ಮಾನಿಸಿ ಉಲ್ಲೇಖ (4)ರಲ್ಲಿ ಬಡ್ತಿ ಆದೇಶವನ್ನು ಹೊರಡಿಸಲಾಗಿತ್ತು.

ಸದರಿ ಆದೇಶದಲ್ಲಿ ಬಡ್ತಿ ಹೊಂದಿದ್ದ ದ್ವಿತೀಯ ದರ್ಜೆ ಸಹಾಯಕರ ಪೈಕಿ ರಾಜ್ಯ ವ್ಯಾಪಿ ಉಳಿಕೆ ಮೂಲ ವೃಂದಕ್ಕೆ ಸೇರಿದ 04 ದ್ವಿತೀಯ ದರ್ಜೆ ಸಹಾಯಕರು ಬಡ್ತಿಯನ್ನು ತಾತ್ಕಾಲಿಕವಾಗಿ ತಿರಸ್ಕರಿಸಿರುತ್ತಾರೆ. ಹಾಗೂ ಒಬ್ಬ ಪ್ರಥಮ ದರ್ಜೆ ಸಹಾಯಕರು ದಿನಾಂಕ: 30-11-2022 ರಂದು ವಯೋನಿವೃತ್ತಿ ಹೊಂದಿರುತ್ತಾರೆ. ಪ್ರಸ್ತುತ ಒಟ್ಟು 05 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳು ಖಾಲಿ ಇದ್ದು ಸದರಿ ಹುದ್ದೆಗಳಿಗೆ, ದಿನಾಂಕ: 18-10-2022 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಬಡ್ತಿಗೆ ಪರಿಗಣಿಸಲಾಗಿದ್ದ ಹೆಚ್ಚುವರಿ ಪಟ್ಟಿಯಲ್ಲಿನ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಜ್ಯೇಷ್ಠತೆ ಹಾಗೂ ಅರ್ಹತೆಯ ಆಧಾರದ ಮೇಲೆ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಬಡ್ತಿ ನೀಡಬೇಕಾಗಿರುತ್ತದೆ.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ದ್ವಿತೀಯ ದರ್ಜೆ ಸಹಾಯಕರುಗಳ ವೃಂದದಿಂದ ಪ್ರಥಮ ದರ್ಜೆ ಸಹಾಯಕರುಗಳ ವೃಂದಕ್ಕೆ ಬಡ್ತಿ ಹೊಂದಲು ಅರ್ಹರಿರುವ ದ್ವಿತೀಯ ದರ್ಜೆ ಸಹಾಯಕರುಗಳಿಗೆ ಪ್ರಥಮ ದರ್ಜೆ ಸಹಾಯಕರುಗಳಾಗಿ ಸ್ಥಾನಪನ್ನ ಬಡ್ತಿ ನೀಡಿ ಸ್ಥಳ ನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**ಆದೇಶ ಸಂಖ್ಯೆ:ಕಾಶಿಇ/37/ಪ್ರದಸ/ಬಡ್ತಿ/ಬಸ್ಥಾವಿ/2022-23, ಬೆಂಗಳೂರು, ದಿನಾಂಕ: 31.12.2022**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಈ ಕೆಳಕಂಡ ದ್ವಿತೀಯ ದರ್ಜೆ ಸಹಾಯಕರುಗಳಿಗೆ ವೇತನ ಶ್ರೇಣಿ ರೂ.27650-650-29600-750-32600-850-36000-950-39800-1100-46400-1250-

52650/-ರಲ್ಲಿ ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ ಅವರುಗಳ ಹೆಸರಿನ ಮುಂದೆ ಖಾಲಂ (4)ರಲ್ಲಿ ನಮೂದಿಸಲಾಗಿರುವ ಕಛೇರಿ/ ಕಾಲೇಜಿನಲ್ಲಿ ಲಭ್ಯವಿರುವ ಖಾಲಿ ಹುದ್ದೆಗೆ ಎದುರಾಗಿ ಕೂಡಲೇ ಜಾರಿಗೆ ಬರುವಂತೆ ಸ್ಥಳನಿಯುಕ್ತಿಗೊಳಿಸಲಾಗಿದೆ.

**ರಾಜ್ಯ ವ್ಯಾಪಿ ಉಳಿಕೆ ಮೂಲ ವೃಂದದಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ಬಡ್ತಿ ಹೊಂದಲು ಅರ್ಹರಿರುವ ದ್ವಿತೀಯ ದರ್ಜೆ ಸಹಾಯಕರುಗಳ ಪಟ್ಟಿ**

| ಕ್ರ.ಸಂ | ಹೆಸರು (ಶ್ರೀ/ಶ್ರೀಮತಿ) | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ ಕಾಲೇಜಿನ ಹೆಸರು | ಸ್ಥಳ ನಿಯುಕ್ತಿಗೊಳಿಸಿರುವ ಕಛೇರಿ/ ಕಾಲೇಜು |
|---|---|---|---|
| 1 | 2 | 3 | 4 |
| 1 | ಸಂತೋಷ್ ಕುಮಾರ್ ಜೆ | ಪ್ರಾದೇಶಿಕ ಕಛೇರಿ. ಬೆಂಗಳೂರು. | ಸ.ಪ್ರ.ದ.ಕಾ ಮಾಲೂರು. |
| 2 | ಶಶಿಕಲ | ಸ.ಪ್ರ.ದ.ಕಾ. ಬೆಳ್ಳಾರೆ. ಸುಳ್ಯಾ | ಸ.ಪ್ರ.ದ.ಕಾ. ಉಪ್ಪಿನಂಗಡಿ. |
| 3 | ಕುಮಾರಿ ಎ.ಎನ್ ನೇತ್ರಾವತಿ | ಸ.ಪ್ರ.ದ.ಕಾ. ಹುಣಸೂರು. | ಪ್ರಾದೇಶಿಕ ಕಛೇರಿ. ಮೈಸೂರು. |
| 4 | ಕಿರಣ್ ಬಿ | ಸ.ಪ್ರ.ದ.ಕಾ. ಕೊಪ್ಪ. ಮದ್ದೂರು. | ಸ.ಪ್ರ.ದ.ಕಾ. ಕೆ ಆರ್ ನಗರ. |
| 5 | ಮಂಜುನಾಥ ಹೆಚ್.ಎ | ಸ.ವಿ.ಕಾ. ಹಾಸನ. | ಸ.ಪ್ರ.ದ.ಕಾ. ಹೊಳೆನರಸೀಪುರ. |

(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)

31/12/2022
ಮುಖ್ಯ ಆಡಳಿತಾಧಿಕಾರಿಗಳು
ಕಾಲೇಜು ಶಿಕ್ಷಣ ಇಲಾಖೆ

ಸೂಚನೆ:-

1. ಪ್ರಾದೇಶಿಕ ಕಛೇರಿ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಂಬಂಧಪಟ್ಟವರು ಈ ಆದೇಶವನ್ನು ವೆಬ್‌ಸೈಟ್‌ನಿಂದ ಪಡೆದು ಬಡ್ತಿ ಹೊಂದಿದವರನ್ನು ಬಿಡುಗಡೆಗೊಳಿಸತಕ್ಕದ್ದು.
2. ಬಡ್ತಿ ಹೊಂದಿದವರು ಸ್ಥಳ ನಿಯುಕ್ತಿಗೊಳಿಸಲಾದ ಕಛೇರಿ/ ಕಾಲೇಜಿನಲ್ಲಿ ಈ ಆದೇಶ ತಲುಪಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು. ತಪ್ಪಿದಲ್ಲಿ ಬಡ್ತಿಯನ್ನು ರದ್ದುಪಡಿಸಲಾಗುತ್ತದೆ. ಬಡ್ತಿಗೊಂಡ ನೌಕರರು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.
3. ಬಡ್ತಿ ಹೊಂದಿರುವ ದ್ವಿತೀಯ ದರ್ಜೆ ಸಹಾಯಕರುಗಳ ಪೈಕಿ ಯಾರಾದರೂ ಪ್ರಸ್ತುತ ನಿಯೋಜನೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ, ಸದರಿ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಇವರಿಗೆ:-

1) ಕೇಂದ್ರ ಕಛೇರಿ / ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ/ ಮೇಲ್ಕಂಡ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ -ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
2) ಮೇಲ್ಕಂಡ ದ್ವಿತೀಯ ದರ್ಜೆ ಸಹಾಯಕರುಗಳಿಗೆ (ಸಂಬಂಧಪಟ್ಟ ಮೇಲಾಧಿಕಾರಿ/ ಪ್ರಾಂಶುಪಾಲರು ಮೂಲಕ)
3) ಮ್ಯಾನೇಜರ್/ಅಧೀಕ್ಷಕರು. ಸೇವಾ ವಿಭಾಗ/ ವರ್ಗಾವಣೆ & ನಿಯೋಜನೆ ವಿಭಾಗ ಕೇಂದ್ರ ಕಛೇರಿ. ಬೆಂಗಳೂರು-ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
4) ಮಾಹಿತಿ ಅಧಿಕಾರಿಗಳು. ಮಾಹಿತಿ ವಿಭಾಗ, ಕೇಂದ್ರ ಕಛೇರಿ. ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್-ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಗಳು:-

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2) ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ಕೇಂದ್ರ ಕಛೇರಿಯ ಎಲ್ಲಾ ಅಧಿಕಾರಿಗಳು/ ಎಲ್ಲಾ ವಿಭಾಗಗಳ ಅಧೀಕ್ಷಕರುಗಳು-ಮಾಹಿತಿಗಾಗಿ.